**All India Radio: Bangalore**
**Regional Bulletin In Kannada**
**20.07.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**20.07.2025 / 2.30 p.m.**
**<><><><>**

**ಮುಖ್ಯಾಂಶಗಳು**

- **ಕಬಿನಿ ಜಲಾಶಯಕ್ಕೆ ಬಾಗಿನ ಅರ್ಪಿಸಿದ ಮುಖ್ಯಮಂತ್ರಿ**
- **ಅಂತಾರಾಷ್ಟ್ರೀಯ ಚಂದ್ರ ದಿನದ ಅಂಗವಾಗಿ ವಿವಿಧ ಕಾರ್ಯಕ್ರಮಗಳ ಆಯೋಜನೆ**
- **ಹರಳು ರೂಪದ ಯೂರಿಯ ಬದಲಾಗಿ ನ್ಯಾನೋ ಯೂರಿಯಾ ಬಳಕೆಗೆ ರೈತರಿಗೆ ಸಲಹೆ**
- **ಭಾರೀ ಮಳೆ ಮುನ್ಸೂಚನೆ ಹಿನ್ನೆಲೆ ರಾಜ್ಯದ ಕರಾವಳಿಯಲ್ಲಿ ರೆಡ್ ಅಲರ್ಟ್ ಘೋಷಿಸಿದ ಭಾರತೀಯ ಹವಾಮಾನ ಇಲಾಖೆ**

<><><><>

ಸರ್ಕಾರದ ಸಾಧನೆಯ ಬಗ್ಗೆ ಸುಳ್ಳು ಹೇಳುವ ಬಿಜೆಪಿಯವರು ಎಂದಿಗೂ ಬಹಿರಂಗ ಚರ್ಚೆಗೆ ಬರುವುದಿಲ್ಲ. ಆದರೆ ನಾವು ಚರ್ಚೆಗೆ ಸದಾ ಸಿದ್ಧ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಕಬಿನಿ ಜಲಾಶಯಕ್ಕೆ ಇಂದು ಬಾಗಿನ ಅರ್ಪಣೆ ಮಾಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾರ್ಯಕ್ರಮದಲ್ಲಿ ಇರುವವರಿಗೆ ಸ್ವಾಗತ ಮಾಡುವುದು ಪರಿಪಾಠ. ನಿನ್ನೆ ಮೈಸೂರಿನ ಸಮಾವೇಶದ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಆ ವೇಳೆಯಲ್ಲಿ ಇರದಿದ್ದ ಕಾರಣ, ಅವರ ಹೆಸರನ್ನು ಉಲ್ಲೇಖಿಸಲಿಲ್ಲ. ಇದರಲ್ಲಿ ಅವಮಾನ ಮಾಡುವ ಪ್ರಶ್ನೆ ಇಲ್ಲ ಎಂದರು. ರಾಜ್ಯದ ಸಣ್ಣ ವ್ಯಾಪಾರಿಗಳಿಗೆ ಡಿಜಿಟಲ್ ಪೇಮೆಂಟ್‌ನಿಂದ ತೆರಿಗೆ ನೋಟೀಸ್ ನೀಡುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿ, ಜಿಎಸ್‌ಟಿ ಎಂಬುದನ್ನು ಕೇಂದ್ರ ಸರ್ಕಾರ ಮಾಡಿದ್ದು, ಜಿಎಸ್‌ಟಿ ಕೌನ್ಸಿಲ್ ಕೇಂದ್ರ ಸರ್ಕಾರದ ಅಧೀನದಲ್ಲಿ ಬರುತ್ತದೆ. ಇದಕ್ಕೆ ರಾಜ್ಯ ಸರ್ಕಾರ ಜವಾಬ್ದಾರಿಯಲ್ಲ. ಆದಾಗ್ಯೂ ಈ ಬಗ್ಗೆ ಕೇಂದ್ರ ಸರ್ಕಾರದೊಂದಿಗೆ ಸಮಾಲೋಚನೆ

ನಡೆಸಿ ಹಾಗೂ ರಾಜ್ಯ ಸರ್ಕಾರದ ವಾಣಿಜ್ಯ ತೆರಿಗೆ ಇಲಾಖೆಯೊಂದಿಗೆ ಚರ್ಚಿಸಿ, ಸೂಕ್ತ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಹೇಳಿದರು.

<><><>

ಅಂತಾರಾಷ್ಟ್ರೀಯ ಚಂದ್ರ ದಿನದ ಅಂಗವಾಗಿ ಕಲಬುರಗಿಯ ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿ ವಿಭಿನ್ನ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ವಿಜ್ಞಾನ ಕೇಂದ್ರದ ಮುಖ್ಯಸ್ಥ ಕೆ.ಎಂ.ಸುನೀಲ ಹೇಳಿದ್ದಾರೆ.

ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಇಂದು ವಿಜ್ಞಾನ ಆಸಕ್ತರಿಗಾಗಿ ಲೂನಾರ್ ಎಕ್ಸಪ್ಲೋರೇಷನ್ ಚಲನಚಿತ್ರ ಪ್ರದರ್ಶನ ಆಯೋಜಿಸಲಾಗಿದೆ. ನಾಳೆ 'ಮೈ ಲೈಫ್ ಆನ್ ಮೂನ್ ಇನ್ ೨೦೫೦' ಎಂಬ ಶೀರ್ಷಿಕೆಯಡಿ ಕಥಾ ಬರವಣಿಗೆ ಸ್ಪರ್ಧೆಯನ್ನು ಜಿಲ್ಲಾ ವಿಜ್ಞಾನ ಕೇಂದ್ರದ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಜುಲೈ ೨೨ ರಂದು 'ಒನ್ ಮೂನ್, ಒನ್ ವಿಷನ್, ಒನ್ ಫ್ಯುಚರ್' ವಿಷಯದ ಮೇಲೆ ನಿವೃತ್ತ ಇಸ್ರೋ ವಿಜ್ಞಾನಿ ಡಾ. ನಾರಾಯಣ ಇನಾಮದಾರ ಉಪನ್ಯಾಸ ನೀಡಲಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

<><><>

ಕೇಂದ್ರ ಸರ್ಕಾರ ಹರಳು ರೂಪದ ಯೂರಿಯ ಬದಲಾಗಿ ನ್ಯಾನೋ ಯೂರಿಯಾ ಬಳಕೆಗೆ ಹೆಚ್ಚು ಉತ್ತೇಜನ ನೀಡುತ್ತಿದೆ. ಇದರಿಂದ ರೈತರಿಗೆ ಹಣ, ಸಮಯ ಉಳಿತಾಯವಾಗುವುದರ ಜತೆಗೆ ಮಣ್ಣಿನ ಫಲವತ್ತತೆಯನ್ನೂ ಕಾಪಾಡಬಹುದಾಗಿದೆ ಎಂದು ದಾವಣಗೆರೆ ಕೃಷಿ ಇಲಾಖೆ ಸಹಾಯಕ ಕೃಷಿ ನಿರ್ದೇಶಕ ಶ್ರೀಧರಮೂರ್ತಿ ಹೇಳಿದ್ದಾರೆ. ದಾವಣಗೆರೆ ತಾಲೂಕಿನ ಹೊನ್ನೂರು ಗ್ರಾಮದಲ್ಲಿ ಕೃಷಿ ಇಲಾಖೆ, ಇಫ್ಕೋ ಸಂಸ್ಥೆಯಿಂದ ಆಯೋಜಿಸಲಾಗಿದ್ದ ಡ್ರೋಣ್ ಮೂಲಕ ನ್ಯಾನೋ ಯೂರಿಯಾ ಸಿಂಪಡಣೆ ಆಂದೋಲನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಹರಳು ರೂಪದ ಯೂರಿಯಾವನ್ನು ಹೆಚ್ಚು ಬಳಸುವುದರಿಂದ ಭೂಮಿಯ ಫಲವತ್ತತೆ ಹಾಳಾಗುವುದಲ್ಲದೇ, ಬೆಳೆಗಳಿಗೆ ಅನುಕೂಲವಾಗುವ ಸೂಕ್ಷ್ಮ ಮಣ್ಣು ಜೀವಿಗಳು ನಾಶವಾಗುತ್ತವೆ. ಆದರೆ ನ್ಯಾನೋ ಯೂರಿಯಾ ಸಿಂಪಡಣೆ ಮಾಡುವುದರಿಂದ ಬೆಳೆಯಲ್ಲಿ ಶೇಕಡ ೮೦ ರಷ್ಟು ಅಧಿಕ ಇಳುವರಿ ಕಾಣಬಹುದಾಗಿದೆ ಎಂದು ಶ್ರೀಧರಮೂರ್ತಿ ಹೇಳಿದರು.

<><><>

ಹಾವೇರಿ ಜಿಲ್ಲೆಯಲ್ಲಿ ಕಂದಾಯ ಇಲಾಖೆಯ ಕೆಲಸಗಳನ್ನು ಚುರುಕುಗೊಳಿಸುವ ಉದ್ದೇಶದಿಂದ ಇ-ಆಫೀಸ್ ವ್ಯವಸ್ಥೆ ಅಳವಡಿಸಲಾಗಿದ್ದು, ಈ ವ್ಯವಸ್ಥೆಯನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ಕಡತಗಳನ್ನು ತ್ವರಿತವಾಗಿ ವಿಲೇವಾರಿ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ಕಚೇರಿಗೆ ಬರುವ ಜನರ ಕೆಲಸಗಳನ್ನು ತುರ್ತಾಗಿ ಆದ್ಯತೆ ಮೇರೆಗೆ ಮಾಡಬೇಕು. ಯಾವುದೇ ಕಡತಗಳನ್ನು ಬಾಕಿ ಉಳಿಸಿಕೊಂಡು ವಿಳಂಬ ಮಾಡದೆ, ಜನರಿಗೆ ತೊಂದರೆಯಾಗದ ರೀತಿ ಕೆಲಸ ಮಾಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದರು. ಜಿಲ್ಲೆಯ ತಾಲೂಕು ಕಚೇರಿ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಡಿಜಿಟಲೀಕರಣ ಮಾಡಲಾಗುತ್ತಿದೆ. ಇದು ದಾಖಲೆ ಸುರಕ್ಷಿತವಾಗಿರಿಸಲು ಶಾಶ್ವತ ಕ್ರಮವಾಗಿದ್ದು, ದಾಖಲೆಗಳ ರಕ್ಷಣೆಗೆ ಉತ್ತಮ ತಂತ್ರಾಂಶ ಇದಾಗಿದೆ. ಜನಸಾಮಾನ್ಯರ ದಾಖಲೆಗಳನ್ನು ರಕ್ಷಿಸಿ, ಅವುಗಳು ಸುಲಭವಾಗಿ ದೊರೆಯುವಂತೆ ಮಾಡುವುದು ತಂತ್ರಾಂಶದ ಉದ್ದೇಶ ಎಂದು ಜಿಲ್ಲಾಧಿಕಾರಿ ಹೇಳಿದರು.

<><><>

ಬೀದಿ ನಾಯಿಗಳ ಹಾವಳಿ, ಬಿಡಾಡಿ ದನಗಳ ಹಾವಳಿ ಬಗ್ಗೆ ಸಾರ್ವಜನಿಕರಿಂದ ಸಾಕಷ್ಟು ದೂರುಗಳು ಕೇಳಿ ಬರುತ್ತಿವೆ. ಈ ಸಮಸ್ಯೆಗಳಿಗೆ ಇನ್ನು ಎರಡು-ಮೂರು ತಿಂಗಳೊಳಗಾಗಿ ಪರಿಹಾರ ಕಂಡುಕೊಳ್ಳುತ್ತೇವೆ ಎಂದು ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಮೇಯರ್ ಜ್ಯೋತಿ ಪಾಟೀಲ ಹೇಳಿದ್ದಾರೆ. ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವತಿಯಿಂದ ದೇಶಪಾಂಡೆ ನಗರದ ಸವಾಯಿ ಗಂಧರ್ವ ಸಭಾಂಗಣದಲ್ಲಿ ಬೀದಿ ನಾಯಿಗಳ ಮತ್ತು ಬಿಡಾಡಿ ಜಾನುವಾರುಗಳ ಹಾವಳಿ ಕುರಿತು ಹಮ್ಮಿಕೊಂಡಿದ್ದ ಸಭೆ ಉದ್ದೇಶಿಸಿ ಅವರು ಮಾತನಾಡಿದರು. ಮಹಾನಗರ ಪಾಲಿಕೆಯಿಂದ ಕಸ ವಿಲೇವಾರಿಗಾಗಿ ಬರುವ ವಾಹನಗಳಲ್ಲಿ ಸಾರ್ವಜನಿಕರು ಕಸ ಹಾಕಬೇಕು. ಇದರಿಂದ ಬೀದಿ ನಾಯಿಗಳ ಹಾವಳಿಗೆ ಕಡಿವಾಣ ಹಾಕಬಹುದಾದಿದೆ. ಎನ್‌ಜಿಓಗಳು ಬೀದಿ ನಾಯಿಗಳನ್ನು ದತ್ತು ಪಡೆಯಲು ಮುಂದೆ ಬರಬೇಕು. ನಾಯಿಗಳ ಹಾಗೂ ದನಗಳ ಹಾವಳಿ ತಡೆಗಟ್ಟಲು ಸಾರ್ವಜನಿಕರು ಪಾಲಿಕೆ ವಿಧಿಸಿದ ನಿಯಮಗಳನ್ನು ಪಾಲನೆ ಮಾಡಬೇಕು ಎಂದು ಮೇಯರ್ ಹೇಳಿದರು.

**ಧ್ವನಿ: ಮೇಯರ್ (೪೦ ಸೆಕೆಂಡ್‌ಗಳು)**

<><><>

ಭಾರೀ ಮಳೆ ಮುನ್ಸೂಚನೆ ಹಿನ್ನೆಲೆಯಲ್ಲಿ ಭಾರತೀಯ ಹವಾಮಾನ ಇಲಾಖೆ ರಾಜ್ಯದ ಕರಾವಳಿ ಹಾಗೂ ಕೇರಳದಲ್ಲಿ ರೆಡ್ ಅಲರ್ಟ್ ಘೋಷಿಸಿದೆ. ಮುಂದಿನ ಆರು ದಿನಗಳ ಕಾಲ ಕರ್ನಾಟಕ, ಕೇರಳ ಮತ್ತು ತಮಿಳುನಾಡು ರಾಜ್ಯಗಳಲ್ಲಿ ಭಾರೀ ಮಳೆ ಮುಂದುವರಿಯಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ ಮೂರು ದಿನಗಳು ಒಡಿಶಾ, ಛತ್ತೀಸ್‌ಗಢ, ಪಶ್ಚಿಮ ಬಂಗಾಳ, ಅಸ್ಸಾಂ, ತ್ರಿಪುರಾ ಸೇರಿದಂತೆ ಈಶಾನ್ಯ ಭಾರತದ ಹಲವು ರಾಜ್ಯಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><><>

ಹವಾಮಾನ ಇಲಾಖೆ ಮುನ್ಸೂಚನೆಯಂತೆ ಉತ್ತರ ಕನ್ನಡ ಜಿಲ್ಲೆಯ ಕರಾವಳಿ ತಾಲೂಕುಗಳಲ್ಲಿ ಮುಂದಿನ ೨೪ ಗಂಟೆಗಳಲ್ಲಿ ಹಠಾತ್ ಪ್ರವಾಹ ಅಪಾಯ, ಭಾರೀ ಮಳೆಯಾಗುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು, ಪ್ರವಾಸಿಗರು ಹಾಗೂ ಮೀನುಗಾರರು ಮುಂಜಾಗ್ರತೆ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ತಿಳಿಸಿದ್ದಾರೆ. ತಗ್ಗು ಪ್ರದೇಶಗಳಲ್ಲಿ ಮೇಲ್ಮೈ ಹರಿವು, ಮುಳುಗಡೆ ಸಂಭವಿಸಬಹುದೆಂದು ಮುನ್ಸೂಚನೆ ನೀಡಿರುವುದರಿಂದ ಸಾರ್ವಜನಿಕರು, ಪ್ರವಾಸಿಗರು, ನೀರಿನ ಪ್ರದೇಶ ಮತ್ತು ಸಮುದ್ರಕ್ಕೆ ಇಳಿಯದಂತೆ ಕಟ್ಟೆಚ್ಚರ ವಹಿಸಬೇಕು. ನದಿ ತೀರದಲ್ಲಿ ವಾಸಿಸುವವರು ಹಠಾತ್ ಪ್ರವಾಹದ ಹಿನ್ನೆಲೆಯಲ್ಲಿ ಸುರಕ್ಷಿತ ಸ್ಥಳಕ್ಕೆ ತೆರಳಬೇಕು ಹಾಗೂ ಅಘನಾಶಿನಿ ನದಿಯು ಅಪಾಯದ ಮಟ್ಟ ಮೀರಿ ಹರಿಯುತ್ತಿರುವ ಬಗ್ಗೆ ಕೇಂದ್ರಿಯ ಜಲ ಆಯೋಗ ಮುನ್ಸೂಚನೆ ನೀಡಿದೆ. ಗುಡ್ಡದ ಇಳಿಜಾರು ಪ್ರದೇಶದಲ್ಲಿ ವಾಸಿಸುವರು ಕೂಡ ಮಳೆಯ ತೀವ್ರತೆಯನುಸಾರ ಸುರಕ್ಷತಾ ಸ್ಥಳಕ್ಕೆ ಸ್ಥಳಾಂತರಗೊಳ್ಳಬೇಕು. ಸಮುದ್ರತೀರಕ್ಕೆ ಮಕ್ಕಳು ಹೋಗದಂತೆ ಪಾಲಕರು ಜಾಗ್ರತೆವಹಿಸಬೇಕು ಮತ್ತು ಸಮುದ್ರ ತೀರದಲ್ಲಿ ಯಾವುದೇ ಮನರಂಜನಾ ಚಟುವಟಿಕೆಗಳನ್ನು ಹಮ್ಮಿಕೊಳ್ಳಬಾರದು.  ತುರ್ತು ಸೇವೆಗೆ ದಿನದ ೨೪ ಗಂಟೆ ಕಾರ್ಯನಿರ್ವಹಿಸುವ ಕಂಟ್ರೋಲ್ ರೂಮ್ ಟೋಲ್ ಫ್ರಿ ಸಂಖ್ಯೆ ೦೮೩೮೨-೨೨೯೮೫೭ ಮತ್ತು ವಾಟ್ಸಪ್ ಸಂಖ್ಯೆ ೯೪೮೩೫೧೧೦೧೫ ಯನ್ನು ಸಂಪರ್ಕಿಸುವಂತೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷೆ ಕೆ.ಲಕ್ಷ್ಮಿಪ್ರಿಯಾ ತಿಳಿಸಿದ್ದಾರೆ.

<><><>

ಮೀನುಗಾರಿಕೆಯಲ್ಲಿ ತೊಡಗಿರುವಾಗ ದೋಣಿ ಮಗುಚಿ ಉತ್ತರ ಕನ್ನಡ ಜಿಲ್ಲೆ ಭಟ್ಕಳ ತಾಲೂಕು ಬೆಳಕೆ ಗ್ರಾಮದ ಮಾದೇವ ಗೋವಿಂದ ಮೊಗೇರ ಎಂಬುವವರು ನೀರಿನಲ್ಲಿ ಮುಳುಗಿ ಮೃತಪಟ್ಟಿದ್ದಾರೆ. ಮೀನುಗಾರಿಕೆ, ಬಂದರು, ಒಳನಾಡು ಜಲಸಾರಿಗೆ ಸಚಿವ ಮಂಕಾಳ ಎಸ್ ವೈದ್ಯ ಅವರು, ಮೃತರ ಮನೆಗೆ ಭೇಟಿ ನೀಡಿ, ಕುಟುಂಬದವರಿಗೆ ಸಾಂತ್ವನ ಹೇಳಿ, ಮೀನುಗಾರರ ಸಂಕಷ್ಟ ಪರಿಹಾರ ನಿಧಿ ಯೋಜನೆಯಡಿ ೧೦ ಲಕ್ಷ ರೂಪಾಯಿ ಪರಿಹಾರದ ಚೆಕ್ ವಿತರಿಸಿದರು.

<><><><>

ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ವತಿಯಿಂದ ೨೦೨೪-೨೫ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ಶೇಕಡ ೬೦ ಕ್ಕಿಂತ ಹೆಚ್ಚಿನ ಅಂಕಗಳನ್ನು ಪಡೆದು ಉತ್ತೀರ್ಣರಾಗಿರುವ ಕರ್ನಾಟಕದ ಮಾಜಿ ಸೈನಿಕರ ಮಕ್ಕಳಿಗೆ 'ಜನರಲ್ ಕೆ.ಎಸ್.ತಿಮ್ಮಯ್ಯ ನಗದು ಅನುದಾನ'ಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಭವನ ಬೆಂಗಳೂರು ಅಥವಾ ದೂರವಾಣಿ ಸಂಖ್ಯೆ : ೦೮೦-೨೫೫೮೫೧೧೯ ಯನ್ನು ಸಂಪರ್ಕಿಸಬಹುದು ಎಂದು ಬೆಂಗಳೂರು ನಗರ ಜಿಲ್ಲೆ, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>